# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 867 |
| **ಮಾನ್ಯ ಸದಸ್ಯರ ಹೆಸರು** | : | ಡಾ: ಎಂ.ಜಿ.ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) |
| **ಉತ್ತರಿಸಬೇಕಾದ ದಿನಾಂಕ** | : | 13.03.2025 |
| **ಉತ್ತರಿಸುವ ಸಚಿವರು** | : | ಕಾನೂನು, ನ್ಯಾಯ, ಮಾನವ ಹಕ್ಕುಗಳು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ರೂಪಿಸಿರುವ ಕಾರ್ಯಕ್ರಮಗಳು ಯಾವುವು; | ಪ್ರವಾಸೋದ್ಯಮ ಇಲಾಖೆಯಿಂದ ರಾಜ್ಯದ ಪ್ರವಾಸಿ ತಾಣಗಳ ಅಭಿವೃದ್ಧಿಗಾಗಿ ರೂಪಿಸಿರುವ ಕಾರ್ಯಕ್ರಮಗಳ ವಿವರವನ್ನು **ಅನುಬಂಧದಲ್ಲಿ** ಒದಗಿಸಿದೆ.<br><br>ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ವ್ಯಾಪ್ತಿಯಲ್ಲಿ ರೂಪಿಸಿರುವ ಕಾರ್ಯಕ್ರಮಗಳ ವಿವರ ಈ ಕೆಳಕಂಡಂತಿದೆ;<br><br>**<u>ಸಂರಕ್ಷಣಾ:</u>** ಕರ್ನಾಟಕ ರಾಜ್ಯಾದ್ಯಂತ ಅವಜ್ಞತೆಗೆ ತುತ್ತಾಗಿರುವ ಅನೇಕ ಅರಕ್ಷಿತ ಸ್ಮಾರಕಗಳು ಮತ್ತು ಇತರೆ ಪ್ರಾಚ್ಯಾವಶೇಷಗಳನ್ನು ಗುರುತಿಸಿ ಸಂರಕ್ಷಿಸಲು ಮತ್ತು ಅರಕ್ಷಿತ ಸ್ಮಾರಕಗಳನ್ನು ರಕ್ಷಿತ ಸ್ಮಾರಕಗಳೆಂದು ಘೋಷಿಸಲು ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಸಹಯೋಗದೊಂದಿಗೆ ಹಾಗೂ ಪುರಾತತ್ವ ವಿಷಯಗಳಲ್ಲಿ ಪರಿಣಿತಿ ಹೊಂದಿರುವ ತಜ್ಞರ ಸಹಯೋಗದೊಂದಿಗೆ ಗ್ರಾಮಾವಾರು ಸರ್ವೆ ಕಾರ್ಯವನ್ನು ಕೈಗೊಳ್ಳಲಾಗಿದೆ.<br><br>**<u>ಸ್ಮಾರಕ ದತ್ತು ಯೋಜನೆ:</u>** ಕರ್ನಾಟಕ ರಾಜ್ಯದಲ್ಲಿರುವ ಇತಿಹಾಸ ಪ್ರಸಿದ್ಧ ಸ್ಮಾರಕಗಳನ್ನು ಸಂರಕ್ಷಿಸಲು ಮತ್ತು ಮೂಲಭೂತ ಸೌಲಭ್ಯಗಳೊಂದಿಗೆ ಅಭಿವೃದ್ಧಿಪಡಿಸಲು Adopt A Monument ಯೋಜನೆಯನ್ನು ಜಾರಿಗೊಳಿಸಲಾಗಿರುತ್ತದೆ. ಏಕ ವ್ಯಕ್ತಿಯಿಂದ ಹಿಡಿದು ಕಂಪನಿವರೆಗಿನ ಸಿ.ಎಸ್.ಆರ್ ಅನುದಾನವನ್ನು ಬಳಸಿಕೊಂಡು ರಾಜ್ಯದಲ್ಲಿರುವ ಸಂರಕ್ಷಿತ ಸ್ಮಾರಕಗಳ ರಕ್ಷಣೆಗೆ ಕ್ರಮವಹಿಸಲಾಗುತ್ತಿದೆ. ಇದರಿಂದಾಗಿ ಅವಜ್ಞತೆಗೆ ತುತ್ತಾಗಿರುವ ಸ್ಮಾರಕಗಳನ್ನು ಆಕರ್ಷಣೀಯ ಪ್ರವಾಸಿ ಕೇಂದ್ರುವನ್ನಾಗಿ ಮಾರ್ಪಡಿಸಿ ರಾಜ್ಯದ ಇತಿಹಾಸ ಮತ್ತು ಪರಂಪರೆ ಹಾಗೂ ಶಿಲ್ಪಕಲೆ ದ್ಯೋತಕವಾಗಿಸಲು ಸ್ಮಾರಕಗಳನ್ನು ರಕ್ಷಿಸಿದಂತಾಗುತ್ತದೆ.<br><br>**<u>3ಡಿ ಲೇಸರ್ ಸ್ಕ್ಯಾನಿಂಗ್ ಮೂಲಕ ಸ್ಮಾರಕಗಳ ಡಿಜಿಟಲ್ ದಾಖಲೀಕರಣ</u>**<br><br>ರಾಜ್ಯದಲ್ಲಿ ಒಟ್ಟು 530 ರಕ್ಷಿತ ಸ್ಮಾರಕಗಳ 3ಡಿ ಲೇಸರ್ ಸ್ಕ್ಯಾನಿಂಗ್ ಮುಖಾಂತರ ಡಿಜಿಟಲೀಕರಣಗೊಳಿಸಲಾಗುತ್ತಿದೆ. ಈ ಡಿಜಿಟಲೀಕರಣದಿಂದ ದತ್ತಾಂಶವನ್ನು ಬಳಸಿಕೊಂಡು ಸ್ಮಾರಕ/ದೇವಾಲಯಗಳ 3ಡಿ ವಾಕ್ ಥ್ರೂ ಸಿದ್ಧಪಡಿಸಲಾಗುತ್ತಿದೆ. ಇದರಿಂದಾಗಿ ಸ್ಮಾರಕಗಳ ಬಗ್ಗೆ ಮತ್ತು ಅದರ ಇತಿಹಾಸ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡುವ ಮುಖಾಂತರ ಸದರಿ ಸ್ಮಾರಕಗಳನ್ನು ಆಕರ್ಷಣೀಯ ಪ್ರವಾಸಿ ಕೇಂದ್ರವಾಗಿ ಮಾರ್ಪಡಿಸಲು ಅವಕಾಶವಿರುತ್ತದೆ. |

..2..

| | | |
|---|---|---|
| | | ಇಲಾಖೆಯ ವ್ಯಾಪ್ತಿಯಲ್ಲಿರುವ 16 ವಸ್ತುಸಂಗ್ರಹಾಲಯ ಮತ್ತು 01 ಕಲಾ ಗ್ಯಾಲರಿಯಲ್ಲಿರುವ ಸುಮಾರು 2.500ಕ್ಕೂ ಹೆಚ್ಚು ಪ್ರಾಚ್ಯಾವಶೇಷಗಳನ್ನು ಹಾಗೂ ಕಲಾಕೃತಿಗಳನ್ನು 3ಡಿ ಲೇಸರ್ ಸ್ಕ್ಯಾನಿಂಗ್ ಮುಖಾಂತರ ಡಿಜಿಟಲೀಕರಣಗೊಳಿಸಲಾಗುತ್ತಿದೆ. ಈ ದತ್ತಾಂಶವನ್ನು ಬಳಸಿಕೊಂಡು "VR/AR" ತಂತ್ರಾಂಶದ ಮುಖಾಂತರ ಪ್ರಾಚ್ಯಾವಶೇಷಗಳನ್ನು ಪರಿಣಾಮಕಾರಿಯಾಗಿ ತೋರಿಸಲು ಮತ್ತು ಅಧ್ಯಾಯನ ಕೈಗೊಳ್ಳಲು ಸಾಧ್ಯವಾಗಲಿದ್ದು, ಈ ಮಾಹಿತಿಯನ್ನು ಪ್ರತಿ ವಸ್ತು ಸಂಗ್ರಹಾಲಯಗಳಲ್ಲಿ ತೋರಿಸುವ ಮುಖಾಂತರ ವಸ್ತುಸಂಗ್ರಹಾಲಯಗಳನ್ನು ಪ್ರವಾಸಿ ಕೇಂದ್ರಗಳನ್ನಾಗಿ ಅಭಿವೃದ್ಧಿಪಡಿಸಲು ಸಾಧ್ಯವಾಗುತ್ತದೆ.<br><br>**ಐಹೊಳೆ ಗ್ರಾಮದ ಸ್ಮಾರಕಗಳಲ್ಲಿ ವಾಸಿಸುತ್ತಿರುವ ಕುಟುಂಬಗಳ ಪುನರ್ವಸತಿ ಮತ್ತು ಸ್ಮಾರಕಗಳ ಸಂರಕ್ಷಣೆ**<br><br>ಬಾಗಲಕೋಟೆ ಜಿಲ್ಲೆಯ ಐಹೊಳೆ ಗ್ರಾಮದಲ್ಲಿ ಸ್ಮಾರಕಗಳನ್ನೇ ಮನೆಗಳನ್ನಾಗಿ ಪರಿವರ್ತಿಸಿಕೊಂಡು ಹಲವಾರು ತಲೆಮಾರುಗಳಿಂದ ವಾಸಿಸುತ್ತಿರುವ ಸುಮಾರು 134 ಕುಟಂಬಗಳನ್ನು ಗುರುತಿಸಲಾಗಿದ್ದು, ಈ ಕುಟುಂಬಗಳಿಗೆ ಪುನರ್ ವಸತಿ ಕಲ್ಪಿಸಲು 14 ಎಕರೆ ಜಮೀನನ್ನು ಖರೀದಿಸಲಾಗಿದೆ. ಈ ಕುಟುಂಬಗಳನ್ನು ಸ್ಥಳಾಂತರಿಸಿ, ಸ್ಥಳಾಂತರಗೊಂಡ ನಂತರ 08 ಸ್ಮಾರಕಗಳನ್ನು ಅಂದಾಜು ರೂ. 8-10 ಕೋಟಿಗಳ ವೆಚ್ಚದಲ್ಲಿ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಧರ್ಮೋತ್ಥಾನ ಟ್ರಸ್ಟ್ ಶೇ.50 ಮತ್ತು ಸರ್ಕಾರದ ವಂತಿಗೆ ಶೇ.50 ರಷ್ಟು ಅನುಪಾತದಲ್ಲಿ ವೆಚ್ಚವನ್ನು ಭರಿಸಿ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಧರ್ಮೋತ್ಥಾನ ಟ್ರಸ್ಟ್ ವತಿಯಿಂದ ಸಂರಕ್ಷಣೆಯನ್ನು ಕೈಗೊಳ್ಳಲು ದಿನಾಂಕ:05/03/2024ರಂದು ಚಾಲುಕ್ಯ ಪಾರಂಪರಿಕ ಪ್ರದೇಶ ನಿರ್ವಹಣಾ ಪ್ರಾಧಿಕಾರ, ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಹಾಗೂ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಧರ್ಮೋತ್ಥಾನ ಟ್ರಸ್ಟ್‌ಗಳ ನಡುವೆ ತ್ರಿಪಕ್ಷಿಯ ಒಡಂಬಡಿಕೆಗೆ ಸಹಿ ಮಾಡಲಾಗಿದೆ. ಈ 8 ಸ್ಮಾರಕಗಳನ್ನು ಪ್ರೇಕ್ಷಣೀಯ ಸ್ಥಳವನ್ನಾಗಿ ಪ್ರವಾಸಿ ಕೇಂದ್ರಗಳನ್ನಾಗಿ ಅಭಿವೃದ್ಧಿಪಡಿಸಲು ಸಾಧ್ಯವಾಗುತ್ತದೆ.<br><br>ರಾಜ್ಯದ 19 ಸ್ಮಾರಕಗಳಲ್ಲಿ 3D ಹೊಲೊಗ್ರಾಮ್‌ಗಳನ್ನು ರಚಿಸಲು ಕರ್ನಾಟಕ ಸರ್ಕಾರ ಮತ್ತು ಕಲೆ ಮತ್ತು ಛಾಯಾಗ್ರಹಣ ಫೌಂಡೇಶನ್" (AP&F) ನಡುವೆ ಒಪ್ಪಂದವನ್ನು ಮಾಡಿಕೊಳ್ಳಲಾಗಿದೆ. ಇದನ್ನು ಸಾಮಾನ್ಯವಾಗಿ "VR/AR ಮೀರಿ" ಎಂದು ಪರಿಗಣಿಸಲಾಗುತ್ತದೆ ಆದರೆ ವಾಸ್ತವವಾಗಿ ಅವುಗಳು ವರ್ಧಿತ ರಿಯಾಲಿಟಿ ಎರಡನ್ನೂ ನೋಡುವ ಮತ್ತು ಅನುಭವಿಸುವ ಸುಧಾರಿತ ಮತ್ತು ಭವಿಷ್ಯದ ಮಾರ್ಗವಾಗಿದೆ. |
| ಆ) | ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಪ್ರವಾಸಿ ತಾಣಗಳಲ್ಲಿ ಗೈಡ್‌ಗಳನ್ನು ನೇಮಕ ಮಾಡಿ ಪ್ರವಾಸಿ ತಾಣಗಳ ವಿವರಗಳನ್ನು ಪ್ರವಾಸಿಗರಿಗೆ ತಿಳಿಸುವ ವ್ಯವಸ್ಥೆ ಮಾಡಲಾಗಿದೆಯೇ; ಇಲ್ಲದಿದ್ದರೆ ಈ ವ್ಯವಸ್ಥೆ ಮಾಡಲಾಗುವುದೆ; | ಪ್ರವಾಸಿ ತಾಣಗಳ ವಿವರಗಳನ್ನು ಪ್ರವಾಸಿಗರಿಗೆ ತಿಳಿಸಲು ರಾಜ್ಯದ 15 ಜಿಲ್ಲೆಗಳಲ್ಲಿನ ಪ್ರಮುಖ ಪ್ರವಾಸಿ ತಾಣಗಳಲ್ಲಿ ಇಲಾಖೆಯಲ್ಲಿ ತರಬೇತಿ ಪಡೆದು ನೋಂದಣಿಯಾಗಿರುವ 400 ಪ್ರವಾಸಿ ಮಾರ್ಗದರ್ಶಿಗಳು (ಗೈಡ್) ಕರ್ತವ್ಯ ನಿರ್ವಹಿಸುತ್ತಿದ್ದಾರೆ.<br><br>ಪ್ರಸ್ತುತ, ಪ್ರಸಕ್ತ ಸಾಲಿನಲ್ಲಿ SCSP/TSP ಯೋಜನೆಯಡಿ ಪರಿಶಿಷ್ಟ ಜಾತಿಗೆ ಸೇರಿದ 100 ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ 60 ಅಭ್ಯರ್ಥಿಗಳಿಗೆ ಒಂದು ತಿಂಗಳ ಪ್ರವಾಸಿ ಮಾರ್ಗದರ್ಶಿ(ಗೈಡ್) ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. |

..3..

| | | |
|---|---|---|
| ಇ) | ಈ ಪ್ರವಾಸಿ ತಾಣಗಳಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಶೌಚಾಲಯ, ಉಪಹಾರ ಗೃಹಗಳು, ವಸತಿ ಗೃಹಗಳು ಮುಂತಾದ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಯೋಜನೆ ರೂಪಿಸಲಾಗಿದೆಯೆ; | ಪ್ರವಾಸೋದ್ಯಮ ಇಲಾಖೆಯಿಂದ ರಾಜ್ಯದ ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರ ಅನುಕೂಲಕ್ಕಾಗಿ ಅತ್ಯುತ್ತಮ ದರ್ಜೆಯ ಪ್ರವಾಸಿ ಸೌಲಭ್ಯಗಳಾದ ಕುಡಿಯುವ ನೀರಿನ ಸೌಲಭ್ಯ, ಶೌಚಾಲಯಗಳು, ಸ್ನಾನಗೃಹಗಳು, ಪಾರ್ಕಿಂಗ್ ವ್ಯವಸ್ಥೆ, ಪ್ರವಾಸಿ ಸೂಚನಾ ಫಲಕಗಳು, ಆಸನಗಳ ವ್ಯವಸ್ಥೆ, ಮೆಟ್ಟಿಲುಗಳು ಮತ್ತು ರೈಲಿಂಗ್ಸ್, ಪರಗೋಲ, ಪಾತ್ ವೇ, ಪ್ರವಾಸಿ ತಾಣಗಳನ್ನು ಸಂಪರ್ಕಿಸುವ ಅಂತಿಮ ಹಂತದ ರಸ್ತೆಗಳನ್ನು ಹಾಗೂ ಇತರೆ ಮೂಲಭೂತ ಸೌಕರ್ಯ ಯೋಜನೆಗಳನ್ನು ಪ್ರವಾಸಿ ತಾಣದಲ್ಲಿನ ಅವಶ್ಯಕತೆ ಅನುಗುಣವಾಗಿ ಹಾಗೂ ಆಯವ್ಯಯದಲ್ಲಿ ಒದಗಿಸುವ ಅನುದಾನದನ್ವಯ ಅಭಿವೃದ್ಧಿಪಡಿಸಲಾಗುತ್ತಿದೆ. |
| (ಈ) | ಪ್ರವಾಸೋದ್ಯಮ ಅಭಿವೃದ್ಧಿಗೆ ನೂತನ ಯೋಜನೆಗಳನ್ನು ಸಿದ್ಧಪಡಿಸಲಾಗಿದೆಯೇ?(ವಿವರ ನೀಡುವುದು) | ಕರ್ನಾಟಕ ಪ್ರವಾಸೋದ್ಯಮ ನೀತಿ 2024-29 ಅನ್ನು ನೂತನವಾಗಿ ಜಾರಿಗೊಳಿಸಲಾಗಿದ್ದು, ಸದರಿ ನೀತಿಯಲ್ಲಿ ಗುರುತಿಸಲಾಗಿರುವ ವಿವಿಧ ಪ್ರವಾಸಿ ಉತ್ಪನಗಳನ್ನು ಅಭಿವೃದ್ಧಿಪಡಿಸಲು ಮುಂದೆ ಬರುವ ಖಾಸಗಿ ಬಂಡವಾಳ ಹೂಡಿಕೆದಾರರಿಗೆ ನೀತಿಯಲ್ಲಿ ನಿಗಧಿಪಡಿಸಿರುವ ಸಹಾಯಧನ, ಪ್ರೋತ್ಸಾಹಧನ ಹಾಗೂ ರಿಯಾಯಿತಿಗಳನ್ನು ನೀಡಲು ಅವಕಾಶ ಕಲ್ಪಿಸಲಾಗಿರುತ್ತದೆ. |

**ಸಂಖ್ಯೆ:TOR 75 TDV 2025**

(ಎಚ್.ಕೆ.ಪಾಟೀಲ)
ಕಾನೂನು, ನ್ಯಾಯ ಮಾನವ ಹಕ್ಕುಗಳು, ಸಂಸದೀಯ
ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು

# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ|| ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:867ಕ್ಕೆ ಅನುಬಂಧ

**ಪ್ರವಾಸೋದ್ಯಮ ಇಲಾಖೆಯಿಂದ ಪ್ರವಾಸಿ ತಾಣಗಳ ಪ್ರಚಾರ ಮತ್ತು ಉತ್ತೇಜನಕ್ಕಾಗಿ ಕೈಗೊಳ್ಳಲಾಗುತ್ತಿರುವ ಕಾರ್ಯಕ್ರಮಗಳ ವಿವರ:**

- ರಾಜ್ಯದ ಪ್ರವಾಸಿ ತಾಣಗಳನ್ನು ಪ್ರಚಾರಪಡಿಸಲು ರಾಷ್ಟ್ರ ಮಟ್ಟದಲ್ಲಿ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ನಡೆಯುವ ಮೇಳ ಹಾಗೂ ರೋಡ್ ಶೋಗಳಲ್ಲಿ ಭಾಗವಹಿಸುವುದು.
- ರಾಜ್ಯ ಪ್ರವಾಸಿ ತಾಣಗಳ ಬಗ್ಗೆ ಒಳಾಂಗಣ ಹಾಗೂ ಹೊರಾಂಗಣ ಪ್ರಚಾರವನ್ನು ವಿಮಾನ ನಿಲ್ದಾಣ, ಬಸ್ ನಿಲ್ದಾಣ, ರೈಲು ನಿಲ್ದಾಣ ಹಾಗೂ ಇತರೆ ಆಯ್ದ ಸ್ಥಳಗಳಲ್ಲಿ ಕೈಗೊಳ್ಳುವುದು.
- ರಾಜ್ಯದ ಪ್ರವಾಸಿ ತಾಣಗಳ ಪ್ರಚಾರಕ್ಕಾಗಿ ರಾಜ್ಯ ಮಟ್ಟದ ಹಾಗೂ ರಾಷ್ಟ್ರ ಮಟ್ಟದ ಪತ್ರಿಕೆಗಳು ಹಾಗೂ ಮ್ಯಾಗಜೀನ್‌ಗಳಲ್ಲಿ ಪ್ರಚಾರ ನೀಡುವುದು.
- ರಾಜ್ಯ ಮಟ್ಟದಲ್ಲಿ, ಜಿಲ್ಲಾ ಮಟ್ಟದಲ್ಲಿ ಹಾಗೂ ಪ್ರಮುಖ ಪ್ರವಾಸಿ ತಾಣಗಳಲ್ಲಿ ನಡೆಯುವ ಹಬ್ಬ ಹಾಗೂ ಉತ್ಸವಗಳಿಗೆ ಇಲಾಖೆಯ ಅನುದಾನ ಒದಗಿಸುವುದು ಹಾಗೂ ಸದರಿ ಹಬ್ಬ ಹಾಗೂ ಉತ್ಸವಗಳಲ್ಲಿ ಇಲಾಖೆಯ ಪರವಾಗಿ ಮಳಿಗೆ ತೆರೆದು ರಾಜ್ಯದ ಪ್ರವಾಸಿ ತಾಣಗಳನ್ನು ವ್ಯಾಪಕವಾಗಿ ಪ್ರಚಾರ ಮಾಡಲಾಗುವುದು.
- ಪ್ರವಾಸಿಗರ ಸುರಕ್ಷತೆಯ ದೃಷ್ಟಿಯಿಂದ ಪ್ರವಾಸಿ ತಾಣಗಳಲ್ಲಿ ಗೃಹ ರಕ್ಷಕ ದಳದ ಸಿಬ್ಬಂದಿಗಳಿಗೆ ತರಬೇತಿ ನೀಡಿ, "**ಪ್ರವಾಸಿ ಮಿತ್ರ**"ಗಳನ್ನಾಗಿ ಪ್ರವಾಸಿ ತಾಣಗಳಿಗೆ ನೇಮಿಸುವುದು.
- ಪ್ರವಾಸಿಗರಿಗೆ ಪ್ರವಾಸಿ ತಾಣಗಳ ಬಗ್ಗೆ ಮಾಹಿತಿಯನ್ನು ಒದಗಿಸಲು ಇಲಾಖೆಯಿಂದ ತರಬೇತಿ ನೀಡಿರುವ ಪ್ರವಾಸಿ ಮಾರ್ಗದರ್ಶಿಗಳ ನೋಂದಣಿ ಮಾಡಿ ಪರವಾನಿಗೆ ನೀಡುವುದು.
- ಪ್ರವಾಸೋದ್ಯಮ ನೀತಿ – 2024-29 ರಡಿ ಸಹಾಯಧನ, ರಿಯಾಯಿತಿ ಮತ್ತು ಉತ್ತೇಜನಗಳಿಗಾಗಿ ಬರುವ ಪ್ರಸ್ತಾವನೆಗಳಿಗೆ ಅನುಮೋದನೆ ನೀಡುವುದು.
- ರಾಜ್ಯದ ಪ್ರವಾಸಿಗರಿಗೆ ಪ್ರವಾಸ ಕೈಗೊಳ್ಳಲು ಅನುಕೂಲವಾಗುವಂತೆ ರಾಜ್ಯದ ನಾನಾ ಕಡೆಗಳಿಂದ "ಟ್ರಾವೆಲ್ ಏಜೆನ್ಸಿ"ಯಾಗಿ ಕಾರ್ಯನಿರ್ವಹಿಸಲು ಬರುವ ಪ್ರಸ್ತಾವನೆಗಳಿಗೆ ಅನುಮೋದನೆ ನೀಡುವುದು.
- ಪ್ರವಾಸಿ ತಾಣಗಳ ಬಳಿ ಪ್ರವಾಸಿಗರಿಗೆ ಆತಿಥ್ಯ ಸೇವೆಯನ್ನು ಒದಗಿಸಲು ಮುಂದೆ ಬರುವ ಮನೆ ಮಾಲೀಕರುಗಳಿಗೆ "ಹೋಂ ಸ್ಟೇ"ನ ಯೋಜನೆಯಡಿ ನೋಂದಣಿ ಮಾಡಲಾಗುವುದು.
- ಎಸ್.ಸಿ.ಎಸ್.ಪಿ / ಟಿ.ಎಸ್.ಪಿ ಯೋಜನೆಯಡಿ ರಾಜ್ಯದ ಸರ್ಕಾರಿ ಪ್ರೌಢ ಶಾಲೆಗಳಲ್ಲಿ, ಮೊರಾರ್ಜಿ ದೇಸಾಯಿ ಹಾಗೂ ಕ್ರೈಸ್ ವಸತಿ ಶಾಲೆಗಳಲ್ಲಿ 8ನೇ ತರಗತಿಯಲ್ಲಿ ಕಲಿಯುತ್ತಿರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಹಾಗೂ ಸಾಮಾನ್ಯ ಯೋಜನೆ ಅಡಿ ಹಿಂದುಳಿದ, ಅಲ್ಪಸಂಖ್ಯಾತ ಹಾಗೂ ಇತರೆ ವರ್ಗದ ಸರ್ಕಾರಿ ಪ್ರೌಢ ಶಾಲೆಗಳಲ್ಲಿ 8ನೇ ತರಗತಿಯಲ್ಲಿ ಕಲಿಯುತ್ತಿರುವ, ವಿದ್ಯಾರ್ಥಿಗಳಿಗೆ 'ಕರ್ನಾಟಕ ದರ್ಶನ' ಪ್ರವಾಸ ಕಾರ್ಯಕ್ರಮವನ್ನು ಏರ್ಪಡಿಸುವುದು.

******